# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 551

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಹೆಚ್. ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 19.02.2024

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಹೊಸದಾಗಿ ಪಡಿತರ ಚೀಟಿಗೆ ಅರ್ಜಿ ಸಲ್ಲಿಸುವುದನ್ನು ಸ್ಥಗಿತಗೊಳಿಸಲಾಗಿದೆಯೇ; ಸ್ಥಗಿತಗೊಳಿಸಲಾಗಿದ್ದಲ್ಲಿ, ಸ್ಥಗಿತಗೊಳಿಸಲು ಕಾರಣಗಳೇನು; | ಹೊಸ ಆದ್ಯತಾ ಪಡಿತರ ಚೀಟಿಯನ್ನು ಕೋರಿ ಸಲ್ಲಿಸಿರುವ ಅರ್ಜಿಗಳ ಬಾಕಿ ಇರುವ 2,95,986 ಅರ್ಜಿಗಳ ವಿಲೇವಾರಿ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್‌ಎ 2021, ದಿನಾಂಕ: 29.09.2023 ರನ್ವಯ ಆದೇಶಿಸಲಾಗಿರುತ್ತದೆ. ಸರ್ಕಾರದ ಆದೇಶದಂತೆ ಬಾಕಿ ಇರುವ ಹೊಸ ಆದ್ಯತಾ ಪಡಿತರ ಚೀಟಿಗಳನ್ನು ವಿಲೇವಾರಿ ಮಾಡಲು ರಾಜ್ಯದ ಎಲ್ಲಾ ಜಂಟಿ/ ಉಪ ನಿರ್ದೇಶಕರಿಗೆ ನಿರ್ದೇಶನ ನೀಡಲಾಗಿರುತ್ತದೆ. ಹೊಸ ಆದ್ಯತಾ ಪಡಿತರ ಚೀಟಿಗಳ ವಿಲೇವಾರಿ ಕಾರ್ಯ ಪ್ರಗತಿಯಲ್ಲಿರುತ್ತದೆ. ಈವರೆಗೆ 57,561 ಹಾಗೂ ತುರ್ತು ವೈದ್ಯಕೀಯ ಚಿಕಿತ್ಸೆಗಾಗಿ ಈವರೆಗೆ 744 ಅರ್ಜಿಗಳಿಗೆ ಅನುಮೋದನೆ ನೀಡಲಾಗಿರುತ್ತದೆ. |
| ಆ | ಹೊಸದಾಗಿ ಪಡಿತರ ಚೀಟಿಗೆ ಅರ್ಜಿ ಸಲ್ಲಿಸಲು ಎಂದಿನಿಂದ ಅವಕಾಶ ನೀಡಲಾಗುವುದು; | ಬಾಕಿ ಇರುವ ಅರ್ಜಿಗಳ ವಿಲೇವಾರಿ ಪ್ರಕ್ರಿಯೆ ಪೂರ್ಣಗೊಂಡ ನಂತರ ಹೊಸ ಪಡಿತರ ಚೀಟಿಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗುತ್ತದೆ. |
| ಇ | ಪಡಿತರ ಚೀಟಿಗಾಗಿ ಈ ಹಿಂದೆ ಅರ್ಜಿ ಸಲ್ಲಿಸಿ ಪಡಿತರ ಚೀಟಿ ವಿತರಣೆಯಾಗದೇ ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು; | ಪಡಿತರ ಚೀಟಿಗಾಗಿ ಈ ಹಿಂದೆ ಅರ್ಜಿ ಸಲ್ಲಿಸಿ ಪಡಿತರ ಚೀಟಿ ವಿತರಣೆಯಾಗದೇ ಬಾಕಿಯಿರುವ ಅರ್ಜಿಗಳ ಸಂಖ್ಯೆ ಈ ಕೆಳಗಿನಂತಿದೆ.<br>ಆದ್ಯತಾ ಪಡಿತರ ಚೀಟಿ: 2,73,866<br>ಆದ್ಯತೇತರ ಪಡಿತರ ಚೀಟಿ: 78,235 |

| | | |
|---|---|---|
| ಈ | ಸದರಿ ಅರ್ಜಿಗಳ ವಿಲೇವಾರಿಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | "ಅ" ರಲ್ಲಿ ವಿವರಿಸಿರುವಂತೆ. |

ಆನಾಸ **54** ಡಿಆರ್ಎ **2024**

(ಕೆ.ಹೆಚ್. ಮುನಿಯಪ್ಪ)

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ

ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ

ಇಲಾಖಾ ಸಚಿವರು